

ಅರುಣ ಪಿ. ಭಟ್ಟ

# ವಾರಭವಿಷ್ಯ 13.2.2020ರಿಂದ 19.2.2020




ವಾರದ ಶುರುವಿನಲ್ಲಿ ಹಣದ ಹರಿವು ಇರುತ್ತದೆ. ವರ್ಚಸ್ಸು ವೃದ್ಧಿ ಆಗಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ನಿರೀಕ್ಷೆಗಿಂತ ಹೆಚ್ಚಿನ ಪ್ರಗತಿ ವಾರದ ಮಧ್ಯದಲ್ಲಿ ಹೆಚ್ಚಿನ ಹಣ ಖರ್ಚಾಗಲಿದೆ. ಇದರಿಂದ ಆತಂಕಕ್ಕೆ ಗುರಿಯಾಗುತ್ತೀರಿ. ಶತ್ರುಗಳ ಉಪಟಳ ಹೆಚ್ಚಾಗಲಿದೆ.

ಶುಭದಿನ 15. ಶ್ರೀರಾಜರಾಜೇಶ್ವರಿ ಜಪ ಮಾಡಿರಿ.




ವಾರದ ಆರಂಭದಲ್ಲಿ ಉದ್ಯೋಗ ಸ್ಥಳದಲ್ಲಿ ಏಳ್ಗೆ ಇದೆ. ನಿಮ್ಮ ಆರೋಗ್ಯ ಚೆನ್ನಾಗಿರುತ್ತದೆ. ಮನೆಯಲ್ಲಿ ಸಂತೋಷದ ವಾತಾವರಣ. ಸಂಗಾತಿ ಮಕ್ಕಳ ಜತೆಗೆ ಸಮಯ ಕಳೆಯಲಿದ್ದೀರಿ. ವಾರದ ಮಧ್ಯ ಭಾಗದಲ್ಲಿ ಹೆಚ್ಚಿನ ಅನುಕೂಲ.

ಶುಭದಿನ 18. ಶ್ರೀರಾಮರಕ್ಷಾಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲೇ ದೇವತಾ ಆರಾಧನೆ. ಸಾಮಾಜಿಕ ಕಾರ್ಯಗಳಲ್ಲಿ ಚಟುವಟಿಕೆಯಿಂದ ಪಾಲ್ಗೊಳ್ಳಲಿದ್ದೀರಿ. ಅಗತ್ಯ ಇರುವವರಿಗೆ ನೆರವು ಕೂಡ ನೀಡಲಿದ್ದೀರಿ. ಆದಾಯದಲ್ಲಿ ಹೆಚ್ಚಳ ಆಗುವ ಸಾಧ್ಯತೆ ಇದೆ. ಮನೆಯತ್ತ ಗಮನಹರಿಸಬೇಕು.

ಶುಭದಿನ 17. ಸೌಂದರ್ಯ ಲಹರಿ ಪಠಿಸಿರಿ.




ಉದ್ಯೋಗಕ್ಕೆ ಶುರುವಿನಲ್ಲಿ ಸಮಯ ನೀಡಬೇಕಾಗುತ್ತದೆ. ಹಣ ಹೂಡಿಕೆಯಲ್ಲಿ ಉತ್ತಮ ಪ್ರಗತಿ. ಈ ಅವಧಿಯಲ್ಲಿ ಹೆಚ್ಚು ಹಣ ಖರ್ಚಾಗುತ್ತದೆ. ಉದ್ಯೋಗದಲ್ಲಿ ಅಂದುಕೊಂಡ ಸ್ಥಾನಮಾನ ಪಡೆಯಲು ಅವಕಾಶ. ಉದ್ಯೋಗಸ್ಥರಿಗೆ ಬಡ್ತಿ ಸಿಗಬಹುದು.

ಶುಭದಿನ 18. ಲಿಂಗಾಷ್ಟಕ ಪಠಿಸಿರಿ




ದಾಂಪತ್ಯ ಜೀವನ ಸಂತೋಷವಾಗಿ ಇರುತ್ತದೆ. ಸಂಬಂಧದಲ್ಲಿ ಬಾಂಧವ್ಯ ಇನ್ನಷ್ಟು ಗಟ್ಟಿಯಾಗುತ್ತದೆ. ವ್ಯಾಪಾರಿಗಳು ತಮ್ಮ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಿದ್ದೀರಿ. ಇದರಿಂದ ಭವಿಷ್ಯದಲ್ಲಿ ದೊಡ್ಡ ಮಟ್ಟದ ಉಪಯೋಗ ಆಗಲಿದೆ.

ಶುಭದಿನ 16. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಶುರುವಿನಲ್ಲಿ ನಿಮ್ಮ ಕೆಲಸಕ್ಕಾಗಿ ಬಹಳ ಶ್ರಮ ಪಡುತ್ತೀರಿ. ಕೆಲಸಗಳು ಆಗಲಿಲ್ಲ ಅಂದರೂ ನಿಮ್ಮ ಆತ್ಮವಿಶ್ವಾಸದಲ್ಲಿ ಯಾವುದೇ ಕುಂದುಂಟಾಗುವುದಿಲ್ಲ. ಪರಿಚಯಸ್ಥರ ಕಾರ್ಯಕ್ರಮದಲ್ಲಿ ಭಾಗಿ ಆಗಲಿದ್ದೀರಿ.

ಶುಭದಿನ 17. ವಿಷ್ಣು ಸಹಸ್ರನಾಮ ಪಠಿಸಿರಿ.




ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮವಾದ ಏಳ್ಗೆ ಇದೆ. ತಾಂತ್ರಿಕ ಕೌಶಲ ಹೆಚ್ಚಿಸಿಕೊಳ್ಳುವುದಕ್ಕೆ ಅವಕಾಶ. ಮಕ್ಕಳ ಪ್ರಗತಿಯಿಂದ ಹೆಮ್ಮೆ ಮೂಡುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಬಹಳ ಹತ್ತಿರದ ಸಂಬಂಧಿಗಳನ್ನು ಭೇಟಿ ಆಗಲಿದ್ದೀರಿ.

ಶುಭದಿನ 16. ಶ್ರೀಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ವಾರದ ಆರಂಭದಲ್ಲಿ ನಿಮ್ಮ ಮೇಲೆ ಒತ್ತಡ ಕಂಡು ಬರಲಿದೆ. ನಿಮ್ಮ ಪಾಲಿನ ಕೆಲಸಗಳನ್ನು ವೇಗವಾಗಿ ಪೂರ್ಣಗೊಳಿಸುವಿರಿ. ಇದರಿಂದ ನಿಮ್ಮ ಬಡ್ತಿಗೆ ದಾರಿ ಗೋಚರಿಸಲಿದೆ. ಮೊದಲ ಮೂರು ದಿನ ಆರೋಗ್ಯವು ಉತ್ತಮವಾಗಿರುತ್ತದೆ.

ಶುಭದಿನ 14. ಹನುಮಾನ್ ಚಾಲಿಸ್ ಪಠಿಸಿರಿ.




ವಾರದ ಶುರುವಿನಲ್ಲಿ ಪ್ರಗತಿ ಇದೆ. ಪ್ರತಿಷ್ಠೆಯನ್ನು ಹೆಚ್ಚು ಮಾಡಿಕೊಳ್ಳುವ ಕಡೆಗೆ ಪ್ರಯತ್ನಿಸಿ.ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ವಾರದ ಮಧ್ಯ ಭಾಗದಲ್ಲಿ ಉದ್ಯೋಗ ವ್ಯಾಪಾರ ವಿಚಾರಗಳು ಪ್ರಾಶಸ್ತ್ಯ ಪಡೆಯುತ್ತವೆ.

ಶುಭದಿನ 14. ಆದಿತ್ಯ ಹೃದಯ ಪಠಿಸಿರಿ.




ಹಿಂದೆಂದಿಗಿಂತ ಹೆಚ್ಚು ಸ್ಪರ್ಧಾತ್ಮಕವಾಗಿ ಇರುತ್ತೀರಿ. ಬಹಳ ಶ್ರಮಪಟ್ಟು, ಯಶಸ್ಸು ಪಡೆಯಬೇಕಾಗುತ್ತದೆ. ಸಂವಹನದ ಕೊರತೆ ಎದ್ದು ಕಾಣಲಿದೆ. ಇನ್ನು ವ್ಯಾಪಾರಿಗಳು ಉದ್ಯಮಿಗಳಿಗೆ ಹಲವು ಬಗೆಯಲ್ಲಿ ಸವಾಲುಗಳು ಎದುರಾಗಲಿವೆ.

ಶುಭದಿನ 18. ಕಾಲಭೈರವನ ಆರಾಧನೆ ಮಾಡಿರಿ.




ನಿಮ್ಮ ನಡವಳಿಕೆಯಿಂದ ಸಹೋದ್ಯೋಗಿಗಳು ಬಹಳ ಹೆಮ್ಮೆ ಪಡುತ್ತಾರೆ. ನಿಮ್ಮ ಸಾಮಾಜಿಕ ಸ್ಥಾನಮಾನದಲ್ಲಿ ಹೆಚ್ಚಳ ಆಗಲಿದೆ. ಜವಾಬ್ದಾರಿಗಳು ಕೂಡ ಜಾಸ್ತಿ ಆಗಲಿದೆ. ಆದಾಯ ಮೂಲಗಳಿಂದ ಹೆಚ್ಚು ಅನುಕೂಲ ಇದೆ.

ಶುಭದಿನ 19. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ದೂರ ಪ್ರದೇಶಗಳಿಗೆ ಪ್ರಯಾಣ ಮಾಡಬೇಕಾಗುತ್ತದೆ. ನಿಮ್ಮ ಪ್ರಯತ್ನಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಮಾಡಲು ಗಮನ ನೀಡುತ್ತೀರಿ. ದೈಹಿಕ ಆರೋಗ್ಯ ಬಾಧೆಗಳು ಈ ಅವಧಿಯಲ್ಲಿ ನಿಮ್ಮ ಕಾಡಲಿದೆ. ವೈದ್ಯರ ಸಲಹೆ ಪಡೆದುಕೊಳ್ಳಿ.

ಶುಭದಿನ 15. ದತ್ತಗುರು ಚರಿತ್ರೆ ಪಠಿಸಿರಿ.

